3) ವಾಹನ ನಿಲುಗಡೆ ಸ್ಥಳಗಳನ್ನು ಗುರ್ತಿಸಿ ಸೂಚನಾ ಫಲಕಗಳನ್ನು ಅಳವಡಿಸಲಾಗಿರುತ್ತದೆ.

4) ಸಂಚಾರ ನಿಯಂತ್ರಣ ಕರ್ತವ್ಯಕ್ಕೆ ಸಿಬ್ಬಂದಿಯ ಕೊರತೆ ಇರುವುದರಿಂದ, ಹಾಲಿ ಇರುವ ಸಿಬ್ಬಂದಿಯ ಜೊತೆಗೆ ಗೃಹರಕ್ಷಕ ದಳದ ಸಿಬ್ಬಂದಿಯವರನ್ನು ಬಳಸಿಕೊಂಡು ಸುಗಮ ಸಂಚಾರಕ್ಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.

ಇ) **ಮತ್ತು ಈ**) ಚಿಂತಾಮಣಿ ಸಂಚಾರ ಪೊಲೀಸ್ ಠಾಣೆ ಸೃಜನೆ ಪ್ರಸ್ತಾವನೆಯು ಇಲಾಖೆಯ ಪರಿಶೀಲನೆಯಲ್ಲಿದೆ.

ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ

1222(2062); ಶ್ರೀ ಕುಮಾರಸ್ವಾಮಿ ಎಚ್.ಕೆ. (ಸಕಲೇಶಪುರ)

ಅ) ರಾಜ್ಯದ ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ನೀಡುವುದು.)

ಇ) ಹಾಸನ ಜಿಲ್ಲೆ ಸಕಲೇಪುರ ಅಗ್ನಿಶಾಮಕ ಠಾಣೆಯ ಕಾರ್ಯಾರಂಭವನ್ನು ಯಾವಾಗ ಮಾಡಲಾಗುವುದು

ಈ) ಹಾಸನ ಜಿಲ್ಲೆ ಆಲೂರು ತಾಲ್ಲೂಕು ಕೇಂದ್ರದಲ್ಲಿ ಅಗ್ನಿಶಾಮಕ ಠಾಣೆ ಮಂಜೂರಾಗಿರುವುದು ನಿಜವೇ ಹಾಗಿದ್ದಲ್ಲಿ ಈ ಠಾಣೆಗೆ ಹುದ್ದೆಗಳನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾವು ಆದೇಶ ಸಂಖ್ಯೆ ಒಇ 225 ಕಅಸೇ 2013 ದಿನಾಂಕ 07.11.2014ರಲ್ಲಿ ಆದೇಶದಲ್ಲಿ ಪ್ರಸಕ್ತ ಸಾಲಿನಲ್ಲಿ (2014–15) 1324 ಅಗ್ನಿಶಾಮಕರು 352 ಅಗ್ನಿಶಾಮಕ ಠಾಣಾಧಿಕಾರಿ ಹುದ್ದೆಗಳನ್ನು (ಒಟ್ಟು 1859) ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಹಾಗೂ 2016–17ರಲ್ಲಿ 47 ಚಾಲಕ ತಂತ್ರಜ್ಞ 176 ಅಗ್ನಿಶಾಮಕ ಚಾಲಕ ಹಾಗೂ 660 ಅಗ್ನಿಶಾಮಕ ಹುದ್ದೆಗಳನ್ನು ಭರ್ತಿ ಮಾಡಲು ಮಂಜೂರಾತಿ ನೀಡಿದೆ. ಅದರಂತೆ, ಮೊದಲನೆ ಹಂತದಲ್ಲಿ 1859 ವಿವಿಧ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ 05.03.2015 ರಿಂದ 06.04.2015ರ ವರೆಗೆ ಆನ್–ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಇ) ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ ಇಲಾಖೆಯ ವಶದಲ್ಲಿರುವ ಸರ್ವೆ ನಂ351/1, 351/2 ಮತ್ತು 351/ಎ ರಲ್ಲಿ 1.10 ಎಕರೆ ನಿವೇಶನದಲ್ಲಿ 3ನೇ ಅಗ್ನಿಶಾಮಕ ಠಾಣಾ ಕಟ್ಟಡ ಹಾಗೂ 2+12 ಅಧಿಕಾರಿ/ಸಿಬ್ಬಂದಿಗಳ ವಸತಿಗೃಹ ಖಾಯಂ ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ಅಪ್ರೋಚ್ ರಸ್ತೆ ಕಾಮಗಾರಿ ನಡೆಯುತ್ತಿದೆ. ಸದರಿ ಕಾಮಗಾರಿ ಪೂರ್ಣಗೊಂಡ ಕೊಡಲೇ ಕಟ್ಟಡವನ್ನು ಇಲಾಖಾ ವಶಕ್ಕೆ ಪಡೆದುಕೊಂಡು ಠಾಣೆ ಕಾರ್ಯಾರಂಭ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಈ) ಹೌದು, ಹಾಸನ ಜಿಲ್ಲೆ ಆಲೂರು ತಾಲ್ಲೂಕಿಗೆ ಅಗ್ನಿಶಾಮಕ ಠಾಣೆ ಸ್ಥಾಪನೆಗೆ ಸರ್ಕಾರವು ದಿನಾಂಕ 31.08.2010 ರಂದು ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಅಗತ್ಯ ಸಿಬ್ಬಂದಿ ಮತ್ತು ವಾಹನ ಉಪಕರಣಗಳನ್ನು ಕಟ್ಟಡವು ಪೂರ್ಣಗೊಂಡು ಕಛೇರಿಯು ಕಾರ್ಯಾರಂಭ ಆದ ಕೂಡಲೇ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ದೇವಾಲಯಗಳ ಅಭಿವೃದ್ಧಿಗೆ ಹಣ ಬಿಡುಗಡೆ

1223(340); ಮಾನ್ಯ ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ಕಳೆದ ಮೂರು ವರ್ಷಗಳಲ್ಲಿ ಮಧುಗಿರಿ ವಿಧಾನಸಭೆ ಮತ ಕ್ಷೇತ್ರ ವ್ಯಾಪ್ತಿಯ ದೇವಾಲಯಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು; (ದೇವಾಲಯವಾರು ಪ್ರತ್ಯೇಕ ವಿವರ ನೀಡುವುದು)

ಆ) ಹಾಗಿದ್ದಲ್ಲಿ, ಮಧುಗಿರಿ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ದೇವಾಲಯಗಳಿಗೆ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆ (ವಿವರ ನೀಡುವುದು)?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು)

ಅ) ಮಧುಗಿರಿ ವಿಧಾನಸಭಾ ಕ್ಷೇತ್ರದ ದೇವಾಲಯಗಳ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಈ ಕೆಳಕಂಡಂತೆ ಒಟ್ಟು ರೂ.122–00ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ದೇವಾಲಯವಾರು ವಿವರ ಅನುಬಂಧದಲ್ಲಿ ಒದಗಿಸಿದೆ.